ವಿಜಪುರ ನಗರದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸ್ಥಾಪಿಸುವುದು.

769(1115)ಶ್ರೀ ಬಸನಗೌಡ ರಾಮನಗೌಡ ಪಾಟೀಲ್ (ವಿಜಾಪುರ) :— ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಜಾಪುರ ನಗರದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನದಲ್ಲಿದೆಯೇ

ಆ) ಹಾಗಿದ್ದಲ್ಲಿ, ಸದರಿ ಕಾಲೇಜು ಸ್ಥಾಪಿಸಲು ಸರಕಾರ ತೆಗೆದುಕೊಳ್ಳುವ ಕ್ರಮಗಳೇನು?

ಇ) ಹಾಗಿಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು?

ಶ್ರೀ ಬಿ.ಎ. ಮೊಹಿದ್ದೀನಾ (ಉನ್ನತ ಶಿಕ್ಷಣ ಸಚಿವರು) :—

ಅ) ಹೌದು

ಆ) ಯಾವುದೇ ಹೊಸ ಸರ್ಕಾರಿ ಕಾಲೇಜುಗಳ ಸ್ಥಾಪನೆಯನ್ನು ಸರ್ಕಾರ ಸಧ್ಯಕ್ಕೆ ಪರಿಶೀಲಿಸುತ್ತಿಲ್ಲ.

ಇ) ಅಸ್ತಿತ್ವದಲ್ಲಿರುವ ಸರ್ಕಾರಿ ಕಾಲೇಜುಗಳನ್ನು ಅಭಿವೃದ್ಧಿಪಡಿಸಬೇಕಾಗಿರುವುದರಿಂದ.

ಕೊಡಗು ಜಿಲ್ಲಾ ಪಂಚಾಯತ್ ಕಛೇರಿಗಳಲ್ಲಿ ಸಿಬ್ಬಂದಿ ಕೊರತೆ.

770(1103) ಶ್ರೀ ಹೆಚ್.ಡಿ. ಬಸವರಾಜ್ (ವಿರಾಜಪೇಟೆ) :— ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲಾ ಪಂಚಾಯತ್ ಕಛೇರಿಗಳಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಬಂದಿದ್ದರೆ, ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು (ವಿವರ ನೀಡುವುದು)

ಇ) ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):—

ಅ) ಬಂದಿದೆ.

ಆ)

ಸಮೂಹ ಎ	-	5
ಸಮೂಹ ಬಿ	-	2
ಸಮೂಹ ಸಿ	-	62
ಸಮೂಹ ಡಿ	-	28
	ಒಟ್ಟು	97

ಇ) ಇತರ ಇಲಾಖೆಗಳಿಂದ ಅಧಿಕಾರಿ : ನೌಕರರನ್ನು ನಿಯೋಜನೆ ಮೇಲೆ ಸಹ ಪಡೆದು ಜಿಲ್ಲಾ ಪಂಚಾಯತ್‌ಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ.

ವಿರಾಜಪೇಟೆ ತಾಲ್ಲೂಕಿನ ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ಸಿಬ್ಬಂದಿ ಕೊರತೆ.

771(1104) ಶ್ರೀ ಹೆಚ್.ಡಿ. ಬಸವರಾಜ್ (ವಿರಾಜಪೇಟೆ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವೀರಾಜಪೇಟೆ ತಾಲ್ಲೂಕಿನ ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ಇತರೇ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ? ಹಾಗಿದ್ದಲ್ಲಿ ಹಾಲಿ ಇರುವ ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು?ಖಾಲಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು? ಇವುಗಳ ಭರ್ತಿಗೆ ಸರ್ಕಾರ ಕೈಗೋಳ್ಳಲಿರುವ ಕ್ರಮಗಳೇನು?

ಆ) ವೀರಾಜಪೇಟೆ ತಾಲ್ಲೂಕಿನ ಆಸ್ಪತ್ರೆಗಳಲ್ಲಿ ಉಚಿತವಾಗಿ ನೀಡುವ ಔಷಧಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಆ ಬಗ್ಗೆ ಕೈಗೊಂಡ ಕ್ರಮಗಳೇನು? ಹಾಗೂ 1994 ದಿಂದ ಈವರೆಗೆ ವೀರಾಜಪೇಟೆ ತಾಲ್ಲೂಕಿನಲ್ಲಿ ಔಷದಿಗಳಿಗಾಗಿ ಸರ್ಕಾರ ವೆಚ್ಚ ಮಾಡಿದ ಹಣವೆಷ್ಟು? (ವಿವರ ನೀಡುವುದು).

ಅ) ಹೌದು.

ವೀರಾಜಪೇಟೆ ತಾಲೋಕಿನಲ್ಲಿರುವ ಆಸ್ಪತ್ರೆಗಳಿಗೆ 39 ವೈದ್ಯರ ಹುದ್ದೆಗಳು ಮಂಜೂರಾಗಿರುತ್ತವೆ. ಇವುಗಳ ಪೈಕಿ 24 ವೈದ್ಯರು ಕಾರ್ಯ ನಿರ್ವಹಿಸುತ್ತಿದ್ದಾರೆ. ಉಳಿದ ಹುದ್ದೆಗಳು ಖಾಲಿ ಇರುತ್ತವೆ.

241 ವಿವಿದ ವರ್ಗದ ಹುದ್ದೆಗಳು ಮಂಜೂರಾಗಿರುತ್ತವೆ. ಅವುಗಳ ಪೈಕಿ 153 ಮಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಮತ್ತು 88 ಹುದ್ದೆಗಳು ಖಾಲಿ ಇರುತ್ತವೆ.

ತಾಲ್ಲೂಕು ಮಟ್ಟದ ಆಸ್ಪತ್ರೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಬರುವ ವೈದ್ಯರುಗಳಿಂದ ಮತ್ತು 1999ನೇ ಸಾರ್ವತ್ರಿಕ ವರ್ಗಾವಣೆ ಸಮಯದಲ್ಲಿ ತುಂಬಲಾಗುವುದು.

ಗ್ರಾಮೀಣ ಪ್ರದೇಶದಲ್ಲಿರುವ ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ತುಂಬಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ನೇರ ನೇಮಕಾತಿಯಿಂದ 573 ವೈದ್ಯರುಗಳನ್ನು ನೇಮಕ ಮಾಡುವ ಸಮಯದಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಲಾಗುವುದು.

ಖಾಲಿ ಇರುವ ವೈದ್ಯೇತರ ಸಿಬ್ಬಂದಿ ಹುದ್ದೆಗಳನ್ನು ಇಲಾಖಾ ನೇಮಕಾತಿ ಸಮಿತಿಯಿಂದ ಹಾಗೂ ಮುಂಬಡ್ತಿಯಿಂದ ತುಂಬಲಾಗುವುದು.

ಆ) ಇಲ್ಲ ಉದ್ಭವಿಸುವುದಿಲ್ಲ

ವಿವರಣಾ ಪಟ್ಟಿಯನ್ನು ಲಗತ್ತಿಸಲಾಗಿದೆ.